ಸಂಪುಟ : 8 ಸಂಚಿಕೆ : 242 ಪುಟ : 4 ಬೆಲೆ : 3.00 ಗುರುವಾರ ನವ್ಹಂಬರ್ 02, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 242 Pages : 4 Price : 3.00 Thursday November 02, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕರ್ನಾಟಕ ರಾಜ್ಯೋತ್ಸವ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿದ ಸಚಿವ ಎಚ್.ಕೆ.ಪಾಟೀಲ ನುಡಿ

# ‘ಕರ್ನಾಟಕ’ ನಾಮಕರಣಕ್ಕೆ ಭವ್ಯ ಇತಿಹಾಸವಿದೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ನಾಮಕರಣ ಹೋರಾಟದಲ್ಲಿ ಜಿಲ್ಲೆಯ ಕೊಡುಗೆ ಅಪಾರವಾಗಿದೆ. ಕವಿ ಕುಮಾರವ್ಯಾಸರು 14–15ನೇ ಶತಮಾನದಲ್ಲಿಯೇ ತನ್ನ ಮಹಾ ಕಾವ್ಯಕ್ಕೆ ‘ಕರ್ನಾಟಕ ಕಥಾಮಂಜರಿ’ ಎಂದು ಹೆಸರಿಸಿದ್ದಾರೆ. ಕನ್ನಡ ಭಾಷಿಕರ ಏಕೀಕರಣಕ್ಕೆ ದೀರ್ಘವಾದ ರೋಚಕ ಇತಿಹಾಸವಿರುವಂತೆ ಕರ್ನಾಟಕ ನಾಮಕರಣಕ್ಕೂ ಭವ್ಯ ಇತಿಹಾಸವಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ ಪಾಟೀಲ ನುಡಿದರು.

ನಗರದ ಕೆ.ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗದಲ್ಲಿ ಬುಧವಾರ ಜರುಗಿದ ಕರ್ನಾಟಕ ರಾಜ್ಯೋತ್ಸವ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಕರ್ನಾಟಕ ನಾಮಕರಣದಲ್ಲಿ ಅವಿಸ್ಮರಣೀಯರಾದವರು ಅಂದಾನಪ್ಪ ದೊಡ್ಡಮೇಟಿ, ಹಳ್ಳಿಕೇರಿ ಗುದ್ಲೆಪ್ಪ, ಕೆ.ಎಫ್.ಪಾಟೀಲ, ವೀರಪ್ಪ ಬಸರೀಗಿಡದ, ಎನ್. ಎಸ್ ಸುಬ್ಬರಾಯರು, ಬೆಳ್ಳಾವೆ ವೆಂಕಟನಾರಾಯಣಪ್ಪರವರು, ದಿವಾಕರ ರಂಗರಾಯರು, ಮುದವೀಡು ಕೃಷ್ಣರಾಯರು, ಚಂದ್ರಶೇಖರ ಶಾಸ್ತ್ರಿಗಳು, ಕೃಷ್ಣ ಶಾಸ್ತ್ರಿಗಳು, ದ.ರಾ ಬೇಂದ್ರೆ, ಶಿ.ಶಿ ಬಸವನಾಳರು, ಟಿ.ಪಿ ಕೈಲಾಸಂ, ಸಿ.ಕೆ ವೆಂಕಟರಾಮಯ್ಯ, ತಿ.ತಾ ಶರ್ಮಾ, ಉತ್ತಂಗಿ ಚನ್ನಬಸಪ್ಪ, ಎಂ.ಆರ್ ಶ್ರೀನಿವಾಸಮೂರ್ತಿ, ಗೋವಿಂದ ಪೈ, ನಂದೀಮಠ, ಕುವೆಂಪು, ರಂ.ಶ್ರೀ ಮುಗಳಿ, ಬಿ.ಎಂ.ಶ್ರೀ, ಅ.ನ ಕೃಷ್ಣರಾಯರು, ವ್ಹಿ.ಕೆ ಗೋಕಾಕ, ದೇ.ಜವರೇಗೌಡ ಮತ್ತಿತರ ಮಹನೀಯರು ನಾಮಕರಣದ ಸಂದರ್ಭದಲ್ಲಿ ಅಮೂಲ್ಯ ಪಾತ್ರ ನಿರ್ವಹಿಸಿದ್ದರು ಎಂದು ಹೇಳಿದರು.




1961ರಲ್ಲಿ ಗದಗನಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ಜರುಗಿತು. ಕೆ.ಜಿ ಕುಂದಣಗಾರ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಈ ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷರಾದ ಕೆ.ಎಚ್ ಪಾಟೀಲ ಅವರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಬೇಕೆಂದು ಒತ್ತಾಯಿಸಿ ನಿರ್ಣಯವನ್ನು ಮಂಡಿಸಿದ್ದು, ಸರ್ವಾನುಮತದಿಂದ ಅಂಗೀಕಾರವಾಯಿತು. 1973ರಲ್ಲಿ ಮುಖ್ಯಮಂತ್ರಿ ಡಿ. ದೇವರಾಜ ಅರಸ, ವಿಧಾನ ಪರಿಷತ್ತಿನಲ್ಲಿ ಕೃಷಿ ಮಂತ್ರಿ ಕೆ.ಎಚ್ ಪಾಟೀಲ ಅವರುಗಳು ಕರ್ನಾಟಕ ನಾಮಕರಣ ನಿರ್ಣಯ ಮಂಡಿಸಿದರು. ಬೆಂಗಳೂರು–ಹಂಪಿ ಗದಗದಲ್ಲಿ ಅದ್ದೂರಿಯ ನಾಮಕರಣೋತ್ಸವ ಸಮಾರಂಭಗಳು ಜರುಗಿದವು.

ಗದುಗಿನ ವೀರನಾರಾಯಣ, ಬೇಲೂರಿನ ಚನ್ನಕೇಶವ, ಮೈಸೂರಿನ ತಾಯಿ ಚಾಮುಂಡಿ, ಕಲಬುರಗಿಯ ಬಂದೇನವಾಜ ಮತ್ತು ವಿಜಯಪುರದ ಗೋಳಗುಮ್ಮಟ, ಆನಂದನವನವೆಂದು ಕರೆಯಿಸಿಕೊಳ್ಳುವ ಕರಾವಳಿ, ಮುಂತಾದ ಐತಿಹಾಸಿಕ ಪ್ರದೇಶಗಳು ಕನ್ನಡನಾಡಿನ ಹಿರಿಮೆ–ಗರಿಮೆಯನ್ನು ಸಾರುತ್ತಾ ಕನ್ನಡ ನಾಡನ್ನು ಅತ್ಯಂತ ಶ್ರೀಮಂತಗೊಳಿಸಿ, ಕನ್ನಡ ತಾಯಿಯನ್ನು ಮತ್ತಷ್ಟು ಸುಂದರಗೊಳಿಸಿವೆ ಎಂದು ನುಡಿದರು.

ಕನ್ನಡ ಏಕೀಕರಣ ಪರಿಕಲ್ಪನೆ, ಚಿಂತನೆಯನ್ನು ಸ್ವಾತಂತ್ರ್ಯ ಪೂರ್ವದಲ್ಲಿಯೇ ಹುಟ್ಟು ಹಾಕಲಾಗಿತ್ತು. ಕನ್ನಡದ ಅನನ್ಯತೆ, ಅಸ್ಮಿತೆ ಕಂಡುಕೊಳ್ಳಲು ಏಕೀಕರಣ ಒಂದು ಪ್ರಬಲ ಸಾಧನವೆಂಬುದನ್ನು ಮನಗಂಡಿದ್ದ ನಮ್ಮ ಹಿರಿಯರ ರಾಷ್ಟ್ರೀಯ ಚಳವಳಿ ಹಾಗೂ ಏಕೀಕರಣ ಧಾರೆಯು ಜೊತೆ–ಯಾಗಿ ಸಾಗಿದ್ದವು. ಸ್ವಾತಂತ್ರ ಪೂರ್ವದಲ್ಲಿ ಮೊಳಕೆಯೊಡೆದ ಚೆಲುವ ಕನ್ನಡ ನಾಡಿನ ಕನಸು ಸ್ವಾತಂತ್ರ್ಯಾನಂತರದ ವರ್ಷಗಳಲ್ಲಿ ಸಾಕಾರಗೊಂಡಿದ್ದು, ಕನ್ನಡಿಗರ ಭಾವನೆಗಳನ್ನು ಬೆಸೆದು ಹೆಮ್ಮರವಾಗಿ ಬೆಳೆದಿದೆ ಎಂದರು.

ರಾಜ್ಯ ಸರ್ಕಾರ ಕೆಲವೇ ದಿನಗಳಲ್ಲಿ ಚುನಾವಣೆಯಲ್ಲಿ ನೀಡಿದ ಪಂಚ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸುವ ಮೂಲಕ ಕ್ರಾಂತಿಕಾರಕ ಹೆಜ್ಜೆಗಳನ್ನಿಟ್ಟು ಒಂದು ಲಕ್ಷಕ್ಕೂ ಹೆಚ್ಚು ಕುಟುಂಬಗಳು ಬಡತನ ರೇಖೆಯಿಂದ ಮೇಲೆ ಬರುವಂತೆ ಮಾಡಿವೆ ಎಂದರು.

ನ್ಯಾಯಾಲಯಗಳಲ್ಲಿ ಆಧುನಿಕ ತಂತ್ರಜ್ಞಾನ ಉಪಯೋಗದೊಂದಿಗೆ ಕಾನೂನಿನಲ್ಲಿ ಕೆಲವು ಬದಲಾವಣೆಗಳನ್ನೂ ಮಾಡಲಾಗುತ್ತಿದೆ. ಶ್ರೀಘ್ರದಲ್ಲಿ ಕಾನೂನು ಸಚಿವಾಲಯದ ನೀತಿ ಪತ್ರವನ್ನು ಹೊರತರಲಾಗುತ್ತಿದೆ. ಪ್ರವಾಸೋದ್ಯಮ ಕ್ಷೇತ್ರದಲ್ಲಿ ಸೌಲಭ್ಯ ಸೃಷ್ಟಿಸಿ ಬಡವರು, ಮಧ್ಯಮ ವರ್ಗದವರು ಶೈಕ್ಷಣಿಕ ಪ್ರವಾಸ, ಶ್ರದ್ಧಾಕೇಂದ್ರಗಳಿಗೆ ಭೇಟಿ, ತೃಪ್ತಿಕರ ವಿಶ್ರಾಂತಿ ಪಡೆಯಲು ವಿನೂತನ ಕಾರ್ಯಕ್ರಮ ರೂಪಿಸಲಾಗುತ್ತಿದೆ ಎಂದರು.

ಸಮಾರಂಭದಲ್ಲಿ ವಿ.ಪ ಸದಸ್ಯ ಎಸ್.ವಿ ಸಂಕನೂರ, ಗದಗ–ಬೆಟಗೇರಿ ನಗರಸಭಾಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಬೆಳಗಾವಿ ನಿವೃತ್ತ ಪ್ರಾದೇಶಿಕ ಆಯುಕ್ತ ಎಂ.ಜಿ ಹಿರೇಮಠ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಸಾರ್ವಜನಿಕರು, ಶಾಲಾ ವಿದ್ಯಾರ್ಥಿಗಳು ಅಪಾರ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

> ನಾಮಕರಣ ಮಹೋತ್ಸವ ನಡೆದು ಇದೀಗ 50 ವಸಂತಗಳು ತುಂಬಿವೆ. ಈ ಅವಧಿಯಲ್ಲಿ ಕರ್ನಾಟಕ ಅದ್ಭುತ ಅಭಿವೃದ್ಧಿ ಸಾಧಿಸಿದೆ. ಅಭಿವೃದ್ಧಿಯ ಕಲ್ಪನೆಗಳನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಅನೇಕ ಸವಾಲುಗಳನ್ನು ಎದುರಿಸಿದೆ. ಪ್ರಾದೇಶಿಕ ಅಸಮತೋಲನವನ್ನು ಸಮತೋಲನಗೊಳಿಸುವ ಪ್ರಯತ್ನಗಳಲ್ಲಿ ತಕ್ಕಮಟ್ಟಿನ ಯಶ ದೊ–ರೆತಿದೆ. ಬೆಳಗಾವಿಯ ಸುವರ್ಣಸೌಧ ನಿರ್ಮಾಣ, ಕಲಬುರಗಿ ಮತ್ತು ಧಾರವಾಡಗಳಲ್ಲಿ ಹೈಕೋರ್ಟ್ ಪೀಠಗಳು, ಕರಾವಳಿಯಲ್ಲಿ ಸಾಗರಮಾಲಾ ಕಾರ್ಯಕ್ರಮ, ಬೆಂಗಳೂರು, ಮಂಗಳೂರು, ಧಾರವಾಡ ಮತ್ತು ಕಲಬುರಗಿಗಳು ಶಿಕ್ಷಣ ಕೇಂದ್ರಗಳಾಗಿ ಬೆಳೆದಿವೆ. ಬೆಂಗಳೂರು ಸಿಲಿಕಾನ್ ಸಿಟಿ ಎಂದು ಖ್ಯಾತಿ ಹೊಂದಿದೆ ಎಂದು ಸಚಿವ ಎಚ್. ಕೆ ಪಾಟೀಲ ನುಡಿದರು.



> ರಾಜ್ಯದ ಪ್ರಾಚೀನ ಸ್ಮಾರಕಗಳನ್ನು ಗುರುತಿಸಿ ಅವುಗಳನ್ನು ಸಂರಕ್ಷಿಸಲು ಜನರ ಪಾಲ್ಗೊಳ್ಳುವಿಕೆಗಾಗಿ ಸ್ಮಾರಕ ದತ್ತು ಯೋಜನೆ ರೂಪಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಪ್ರವಾಸೋದ್ಯಮದ ವೈಜ್ಞಾನಿಕ ಅಭಿವೃದ್ಧಿಗಾಗಿ ಈಗಾಗಲೇ ತಜ್ಞರಿಂದ ವರದಿ ಪಡೆಯಲಾಗಿದೆ. ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಕ್ರಮ ಜರುಗಿಸಲಾಗುತ್ತಿದೆ. ಗದಗ ಜಿಲ್ಲೆಯಲ್ಲಿ ಆರೋಗ್ಯ, ಶಿಕ್ಷಣ, ಕ್ರೀಡಾ ಕ್ಷೇತ್ರಗಳಲ್ಲಿ ಹಾಗೂ ಮೂಲಭೂತ ಸೌಲಭ್ಯ ವಲಯಗಳಲ್ಲಿ ಅಪಾರ ಸೌಲಭ್ಯಗಳ ಸೃಷ್ಟಿಯಾಗಿದೆ. ಜಿಮ್ಸ್‌ನಲ್ಲಿ 450 ಹಾಸಿಗೆಗಳ ಆಸ್ಪತ್ರೆ ಲೋಕಾರ್ಪಣೆಗೊಳ್ಳುತ್ತಿದೆ. ಹೃದಯ ರೋಗಿಗಳ ಚಿಕಿತ್ಸೆಗಾಗಿ ಕ್ಯಾಥ್‌ಲ್ಯಾಬ್ ಸದ್ಯದಲ್ಲಿಯೇ ಕಾರ್ಯಾರಂಭ ಮಾಡಲಿದೆ.
>
> **– ಎಚ್.ಕೆ ಪಾಟೀಲ.**
> ಸಚಿವರು.

## ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ಗದಗ ಜಿಲ್ಲಾ ಪ್ರವಾಸ



**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ನವೆಂಬರ್ 3ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಹೀಗಿದೆ.

ನವೆಂಬರ್ 3ರಂದು ಬೆಳಿಗ್ಗೆ 10.50ಕ್ಕೆ ಹುಬ್ಬಳ್ಳಿಯಿಂದ ರಸ್ತೆಯ ಮೂಲಕ ಗದುಗಿಗೆ ಆಗಮಿಸುವರು. ಬೆಳಿಗ್ಗೆ 10.55ಕ್ಕೆ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ‘ಕರ್ನಾಟಕ ಸಂಭ್ರಮ 50’ರ ಕನ್ನಡ ಜ್ಯೋತಿ ಸ್ವೀಕಾರ ಹಾಗೂ ಮೆರವಣಿಗೆಯಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 11.45ಕ್ಕೆ ನಗರದ ಭೂಮರಡ್ಡಿ ವೃತ್ತದಲ್ಲಿ ಕರ್ನಾಟಕ ಸಂಭ್ರಮ–50ರ ಸ್ಮಾರಕ ಅನಾವರಣಗೊಳಿಸುವರು. ಮಧ್ಯಾಹ್ನ 12.15ಕ್ಕೆ ನಗರದ ದಿ.ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕರ್ನಾಟಕ ಸಂಭ್ರಮ 50ರ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 1.45ಕ್ಕೆ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ 450 ಹಾಸಿಗೆಗಳ ಬೋಧಕ ಆಸ್ಪತ್ರೆಯ ಕಟ್ಟಡ ಉದ್ಘಾಟನೆ ಹಾಗೂ ಸೂಪರ್ ಸ್ಪೆಷಾಲಿಟಿ ಹೃದಯ ಆರೈಕೆ ಕೇಂದ್ರದ ಶಿಲಾನ್ಯಾಸ ಮತ್ತು ರಕ್ತ ಕೇಂದ್ರದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 2 ಗಂಟೆಗೆ ನಾಗಾವಿಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಆವರಣದಲ್ಲಿನ ಸಬರಮತಿ ಆಶ್ರಮಕ್ಕೆ ಭೇಟಿ ನೀಡುವರು. ಮಧ್ಯಾಹ್ನ 2.10ಕ್ಕೆ ಆರ್.ಡಿ.ಪಿ.ಆರ್ ವಿಶ್ವವಿದ್ಯಾಲಯದ ಅಧ್ಯಯನ ಶಾಖೆ–2ರ ಕಟ್ಟಡದ ಶಂಕುಸ್ಥಾಪನೆಯಲ್ಲಿ ಪಾಲ್ಗೊಳ್ಳುವರು. ಸಂಜೆ 4ಕ್ಕೆ ಗದುಗಿನಿಂದ ಹುಬ್ಬಳ್ಳಿಗೆ ರಸ್ತೆ ಮೂಲಕ ತೆರಳಿ ಅಲ್ಲಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಮಾಡುವರು ಎಂದು ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಸಂಭ್ರಮ–50ರ ಇಂದಿನ ಸಾಂಸ್ಕೃತಿಕ ಕಾರ್ಯಕ್ರಮಗಳು

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆಯಿಂದ ಮೈಸೂರು ರಾಜ್ಯಕ್ಕೆ ಕರ್ನಾಟಕ ನಾಮಕರಣ ಸುವರ್ಣ ಮಹೋತ್ಸವದ ‘ಕರ್ನಾಟಕ ಸಂಭ್ರಮ–50’ ಸಮಾರಂಭವನ್ನು ನವೆಂಬರ್ 1, 2 ಮತ್ತು 3ರಂದು ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಆಚರಿಸಲಾಗುತ್ತಿದೆ.

ನವೆಂಬರ್ 2ರಂದು ಸಂಜೆ 6 ಗಂಟೆಗೆ ಗದಗ ಜಿಲ್ಲೆಯ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಟೀಂ ಎಕ್ಸ್‌ಟೆಸಿ ನೃತ್ಯ ಕಲಾತಂಡದಿಂದ ನೃತ್ಯ ವೈಭವ, ಅನನ್ಯ ಭಟ್ ತಂಡದವರಿಂದ ಕನ್ನಡ ಗೀತೆಗಳ ಕಾರ್ಯಕ್ರಮ ಜರುಗಲಿವೆ.




### ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಂಭ್ರಮದ ರಾಜ್ಯೋತ್ಸವ ಧ್ವಜಾರೋಹಣ

# ಆಕರ್ಷಕ ಪಥಸಂಚಲನ, ಸಾಧಕರಿಗೆ ಸನ್ಮಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬುಧವಾರ ನಡೆದ ಕನ್ನಡ ರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ ಪಾಟೀಲ ಅವರು ಧ್ವಜಾರೋಹಣ ನೆರವೇರಿಸಿ ವಿವಿಧ ದಳಗಳ ವೀಕ್ಷಣೆ ಮಾಡಿದರು. ನಂತರ ಜರುಗಿದ ಆಕರ್ಷಕ ಪಥ ಸಂಚಲನದ ನೇತೃತ್ವವನ್ನು ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಶಂಕರಗೌಡ ಚೌದ್ರಿ ವಹಿಸಿದ್ದರು. ಜಿಲ್ಲಾ ಪೊಲೀಸ್ ಬ್ಯಾಂಡ್‌ಗೆ ಶಿಸ್ತಿನ ಹೆಜ್ಜೆ ಹಾಕಿದ ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಜಿಲ್ಲಾ ನಾಗರಿಕ ಪೊಲೀಸ್ ಪಡೆ, ಹೋಮ್ ಗಾರ್ಡ್ಸ್, ಅಬಕಾರಿ, ಅರಣ್ಯ ರಕ್ಷಕ ಪಡೆ, ಅಗ್ನಿ ಶಾಮಕ ದಳ, ಸೀನಿಯರ್ಸ್ ಬಾಯ್ಸ್ ಹಾಗೂ ಗರ್ಲ್ಸ್ ದಳಗಳು ಸಚಿವ ಎಚ್.ಕೆ ಪಾಟೀಲ ಅವರಿಗೆ ಗೌರವ ವಂದನೆ ನೀಡಿದರು.



ಬೆಳಗಾವಿ ನಿವೃತ್ತ ಪ್ರಾದೇಶಿಕ ಆಯುಕ್ತರಾದ ಎಂ.ಜಿ ಹಿರೇಮಠ ಅವರು ಸುದೀರ್ಘ 30 ವರ್ಷಗಳ ಸಾರ್ವಜನಿಕ ಸೇವೆ ಸಲ್ಲಿಸಿದ್ದು, ಸುಮಾರು 500 ಕೋಟಿಗೂ ಹೆಚ್ಚು ಮೌಲ್ಯದ ವಕಾರ ಸಾಲ ಸರ್ಕಾರದ ಜಮೀನು ರಕ್ಷಿಸಿದ್ದಕ್ಕಾಗಿ ವಿಶೇಷವಾಗಿ ಸನ್ಮಾನಿಸಲಾಯಿತು.

ಇತ್ತೀಚೆಗೆ ಇಸ್ರೋದಿಂದ ಉಡಾವಣೆಯಾದ ಚಂದ್ರಯಾನದಲ್ಲಿ ಮಹತ್ವದ ಪಾತ್ರವಹಿಸಿದ್ದ ಸುಧೀಂದ್ರ ಬಿಂದಗಿ, ವೈದ್ಯಕೀಯ ವಿಭಾಗದಲ್ಲಿ ಡಾ. ಜಿ.ಬಿ ಬಿಡಿನಹಾಳ, ಸಾಹಿತ್ಯ ಮತ್ತು ಪತ್ರಿಕೋದ್ಯಮ ವಿಭಾಗದಲ್ಲಿನ ಗಣನೀಯ ಸೇವೆ ಸಲ್ಲಿಸಿದ ಜೆ.ಕೆ ಜಮಾದಾರ, ಚಿತ್ರಕಲಾ ಕ್ಷೇತ್ರದಲ್ಲಿ ವಿಜಯ ಕಿರೇಸೂರು, ಸಾಹಿತ್ಯ ಕ್ಷೇತ್ರದಲ್ಲಿ ಎ.ಎಸ್ ಮಕಾನದಾರ, ಸಂಗೀತ ಕ್ಷೇತ್ರದಲ್ಲಿ ಜಗನ್ನಾಥ ಕಲಬುರ್ಗಿ, ಜಾನಪದ ಕ್ಷೇತ್ರದಲ್ಲಿ ಸಣ್ಣಮಲಕಪ್ಪ ಭಜಂತ್ರಿ, ಸಾಂಸ್ಕೃತಿಕ ಹಬ್ಬದಲ್ಲಿ ಗ್ಲೋಬಲ್ ಐಕಾನಿಕ್ ಪ್ರಸಸ್ತಿ ಪಡೆದ ಗವಿಸಿದ್ಧಯ್ಯ ಹಳ್ಳಿಕೇರಿಮಠ, ಕೆರೆಯಲ್ಲಿ ಮುಳಗುತ್ತಿರುವ ಇಬ್ಬರು ಮಕ್ಕಳನ್ನು ರಕ್ಷಿಸಿದ ಶೌರ್ಯ ಕಾರ್ಯಕ್ಕಾಗಿ ರಾಜಸಿಂಗ್, ಸಹಕಾರ ಕ್ಷೇತ್ರದಲ್ಲಿ ಜೆ.ಕೊಟ್ರೇಶಿ, ಕ್ರೀಡಾ ವಿಭಾಗದಲ್ಲಿ ಸರ್ಫರಾಜ್ ಶೇಖ್, ಕು. ಪವಿತ್ರಾ ಕುರ್ತಕೋಟಿ, ಛಾಯಾಗ್ರಾಹಕರಾದ ರಾಮಣ್ಣ ಚಿನ್ನಪ್ಪ ವಗ್ಗಿ, ಪಬ್ಲಿಕ್ ಟಿ.ವಿ ಜಿಲ್ಲಾ ವರದಿಗಾರ ಭೀಮನಗೌಡ ಪಾಟೀಲ, ಸಿಟಿ ನ್ಯೂಸ್ ಕ್ಯಾಮರಾಮನ್ ಜಾಕೀರ್ ಇವರುಗಳನ್ನು ಸಚಿವರು ಸೇರಿದಂತೆ ಗಣ್ಯರು ಸನ್ಮಾನಿಸಿದರು

> ನಗರದ ಕೆ.ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ನಗರದ ಸಿಡಿಓ ಜೈನ್ ಪ್ರೌಢಶಾಲೆಯ ವಿದ್ಯಾರ್ಥಿಗಳಿಂದ ನಮಸ್ತೆ ಕರುನಾಡಿಗೆ, ತೋಂಟದಾರ್ಯ ಪ್ರೌಢಶಾಲೆಯ ವಿದ್ಯಾರ್ಥಿಗಳಿಂದ ಕೇಳಿಸದೆ ಕಲ್ಲು ಕಲ್ಲಿನಲಿ ಕನ್ನಡ ನುಡಿ, ಮಹಾವೀರ ಜೈನ್ ಪ್ರೌಢಶಾಲೆಯ ವಿದ್ಯಾರ್ಥಿಗಳಿಂದ ಬಾರಿಸು ಕನ್ನಡ ಡಿಂಡಿಮವ ನೃತ್ಯ ರೂಪಕಗಳು ನೆರೆದ ಗಣ್ಯರ, ಸಾರ್ವಜನಿಕರ ಪ್ರಶಂಸೆಗೆ ಪಾತ್ರವಾದವು.



# ಸೆಲ್ಫಿ ಸ್ಪಾಟ್ ಆದ ಜಿಲ್ಲಾಡಳಿತ ಭವನ!



**■ ವಿಜಯಸಾಕ್ಷಿ ಸುದ್ದಿ, ಗದಗ**

ಮೈಸೂರು ರಾಜ್ಯಕ್ಕೆ ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಗದಗ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಅಭೂತಪೂರ್ವ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

ಐವತ್ತು ವರ್ಷಗಳ ಹಿಂದೆ ಜರುಗಿದ ಕರ್ನಾಟಕ ನಾಮಕರಣ ಸಂಭ್ರಮೋತ್ಸವದ ಐತಿಹಾಸಿಕ ಕಾರ್ಯಕ್ರಮದ ಮರುಸೃಷ್ಟಿಯ ಕಾರ್ಯಕ್ರಮಕ್ಕೆ ಗದಗ–ಬೆಟಗೇರಿ ಸಂಪೂರ್ಣ ನಗರ ದೀಪಾಲಂಕಾರ ಹಾಗೂ ಚಿತ್ತಾರಗಳೊಂದಿಗೆ ಸಿಂಗಾರಗೊಂಡಿದೆ. ಅವಳಿ ನಗರದ ವೃತ್ತಗಳು, ಬೀದಿಗಳು, ಜಿಲ್ಲಾಡಳಿತ ಭವನ ಸೇರಿದಂತೆ ಸರಕಾರಿ ಕಚೇರಿಗಳು ದೀಪಾಲಂಕರಗಳೊಂದಿಗೆ ಝುಗಮಗಿಸುತ್ತಿವೆ.

ಜಿಲ್ಲಾಡಳಿತ ಭವನಕ್ಕೆ ಮಾಡಿದ ವಿದ್ಯುತ್ ದೀಪಾಲಂಕಾರ ಈಗ ಅವಳಿ ನಗರದ ನಿವಾಸಿಗಳಿಗೆ ಫೋಟೋ ಹಾಗೂ ಸೆಲ್ಫಿ ಸ್ಪಾಟ್ ಆಗಿದೆ. ತಡರಾತ್ರಿಯವರೆಗೂ ಅವಳಿ ನಗರದ ಸಾರ್ವಜನಿಕರು ಕುಟುಂಬ, ಸ್ನೇಹಿತರು ತಂಡೋಪತಂಡವಾಗಿ ಜಿಲ್ಲಾಡಳಿತಕ್ಕೆ ಆಗಮಿಸಿ ಸೆಲ್ಫಿ ಹಾಗೂ ಫೋಟೋ ಶೂಟ್ ಮಾಡಿಕೊಳ್ಳುತ್ತಿರುವ ದೃಶ್ಯಗಳು ಕಂಡು ಬಂದವು.

# ಎಚ್.ಕೆ. ಪಾಟೀಲರಿಂದ ಛಾಯಾಚಿತ್ರ ಪ್ರದರ್ಶನ ಮಳಿಗೆ ಉದ್ಘಾಟನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣಗೊಂಡು 50 ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ‘ಕರ್ನಾಟಕ ಸಂಭ್ರಮ–50’ ಕಾರ್ಯಕ್ರಮವನ್ನು ಗದಗ–ಬೆಟಗೇರಿ ಅವಳಿ ನಗರದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ ನಗರದ ದಿ.ಕಾಟನ ಸೇಲ್ ಸೊಸೈಟಿ ಆವರಣದಲ್ಲಿ ಮೂರು ದಿನಗಳ ಕಾಲ ಗದಗನಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ರಾಜ್ಯ ಸರ್ಕಾರದ ಜನಪ್ರಿಯ ಯೋಜನೆಗಳು ಹಾಗೂ ಕನ್ನಡದ ಕುರಿತು ಬೆಳಕು ಚೆಲ್ಲುವ ಛಾಯಾಚಿತ್ರ ಪ್ರದರ್ಶನ ಮಳಿಗೆಯನ್ನು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ ಪಾಟೀಲ ಅವರು ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಶಾಸಕ ಜಿ.ಎಸ್ ಪಾಟೀಲ, ಮಾಜಿ ಶಾಸಕರಾದ ಡಿ.ಆರ್ ಪಾಟೀಲ, ಜಿ.ಎಸ್ ಗಡ್ಡದೇವರಮಠ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಸಿದ್ದು ಪಾಟೀಲ, ಮ್ಯಾಗ್ಸೆಸ್ಸೆ ಪ್ರಶಸ್ತಿ ವಿಜೇತ ರಾಜೇಂದ್ರ ಸಿಂಗ್, ನಿವೃತ್ತ ಬೆಳಗಾವಿ ಪ್ರಾದೇಶಿಕ ಆಯುಕ್ತ ಎಂ.ಜಿ ಹಿರೇಮಠ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಉಪ ಅರಣ್ಯ ಸಂರಕ್ಷಣಾಧಿಕಾರಿ ದೀಪಿಕಾ ಬಾಜಪೇಯಿ ಮುಂತಾದವರಿದ್ದರು.

## ಗದಗ-ಬೆಟಗೇರಿ ಅವಳಿ ನಗರದಲ್ಲಿ ಇಂದು ನೀರು ಪೂರೈಕೆ ಎಲ್ಲೆಲ್ಲಿ?

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 2 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ:** ವಾರ್ಡ್ ನಂ. 22 ಗಂಗಿಮಡಿ ಲೀಡ್ಕರ್ ಬಡಾವಣೆ, ಕನ್ನಡ ಶಾಲೆ ಯಲ್ಲಮ್ಮನ ಗುಡಿ, ಶಿವಪ್ಪರ ಲೈನ್, ಆಟೋ ಸ್ಟ್ಯಾಂಡ್ ಲೈನ್, ಪ್ರಕಾಶ್ ಅಂಗಡಿ ಅವರ ಲೈನ್, ದಖನಿ ಅವರ ಲೈನ್ ವಾರ್ಡ್ ನಂ. 29 ರಾಜೀವ್ ಗಾಂಧಿನಗರ 1ನೇ ಕ್ರಾಸ್‌ನಿಂದ 9ನೇ ಕ್ರಾಸ್ ವರೆಗೆ. ವಾರ್ಡ್ ನಂ. 16 ಹೊಂಬಳ ನಾಕಾ ಜನತಾ ಕಾಲೋನಿ ವಾರ್ಡ್ ನಂ. 13,14 ಹಣಗಿ ಜೀನ್ ಲೈನ್, ಮುಂಡರಗಿ ಲೈನ್, ಕುರಡಗಿ ಅವರ ಲೈನ್, ಜನತಾ ಗಾರ್ಡನ್ ಲೈನ್, ಮಣಿಕಂಠರ ಲೈನ್, ಬಿಕೆ ಮಾಸ್ತರ್ ಲೈನ್, ಕಾಮೋಜಿ ಅವರ ಲೈನ್, ಪಠಾಣರ ಲೈನ್, ಹೊಸಮನಿ ಅವರ ಲೈನ್, ಹಾದಿಮನಿ ವಕೀಲರ ಲೈನ್, ಮಟ್ಟಿ ವಕೀಲರ ಲೈನ್, ಪವಾಡ ಶೆಟ್ಟರ್ ಲೈನ್, ಶಾಂತಗಿರಿಯವರ ಲೈನ್, ಸೋನಿಯಾರ ಲೈನ್, ಪೂಜಾರ ಲೈನ್, ಫತ್ತೆಪುರದವರ ಲೈನ್, ತಡಿಯವರ ಲೈನ್, ಹೆಡ್ ಪೋಸ್ಟ್ ಲೈನ್, ಕಾರಂತ ಡಾಕ್ಟರ್ ಲೈನ್, ಮುಳಗುಂದ ಡಾಕ್ಟರ್ ಲೈನ್, ವಕೀಲರ ಚಾಳ ಗೌಸ್ ಬಿಲ್ಡಿಂಗ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ 7,6,5 ಪೆಂಡಾರ ಓಣಿ, ಮಲ್ಲೇಶಪ್ಪನವರ ಲೈನ್, ನಂದರಗಿ ಲೈನ್, ಗಟ್ಟಿಯವರ ಲೈನ್, ಕೋರವರ ಲೈನ್, ಬಚ್ಚಲಕ್ಕಮ್ಮನ ಗುಡಿ ಲೈನ್, ಹುಚ್ಚನಗೌಡ್ರ ಓಣಿ, ಚೆನ್ನೇಗೌಡರ ಓಣಿ, ಕನ್ಯಾಳ ಅಗಸಿ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 4 ಟರ್ನಲ್ ಪೇಟೆ ಪೂರ್ತಿ ಭಾಗ ಹುಯಿಲಗೋಳ ಅವರ ಲೈನ್, ಬ್ಯಾಳಿ ಅವರ ಲೈನ್, ಮೆಂಬರ್ ಮನೆ ಲೈನ್, ಗೌರಿಗುಡಿ ಲೈನ್, 200 ಮನೆ, 275 ಮನೆ, ಸುಣ್ಣದ ಬಟ್ಟಿ ಲೈನ್, ಗಾರ್ಡನ್ ಲೈನ್, ಕಣವಿ ಪ್ಲಾಟ್ ಪೂರ್ತಿ ಭಾಗ ಬಿಎಸ್‌ಎನ್‌ಎಲ್ ಪೂರ್ತಿ ಭಾಗ, ಮಸೂತಿ ಲೈನ್

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ನವೆಂಬರ್ 3ರಂದು ಕರ್ನಾಟಕ ಸಂಭ್ರಮ 50ರ ಸಮಾರಂಭ ನಡೆಯಲಿದೆ. ಪ್ರಾಸಂಗಿಕ ಕರಾರಿನ ಮೇಲೆ 200 ವಾಹನಗಳನ್ನು ಗದಗ ಜಿಲ್ಲೆಯ ಸುತ್ತಮುತ್ತಲಿನ ತಾಲೂಕು ಹಾಗೂ ಗ್ರಾಮಗಳ ಸಾರ್ವಜನಿಕರಿಗೆ ಸದರಿ ಕಾರ್ಯಕ್ರಮದ ವೀಕ್ಷಣೆಗೆ ಅನುಕೂಲವಾಗುವಂತೆ ನೀಡಲಾಗುತ್ತಿದೆ.

ನವೆಂಬರ್ 3ರಂದು ವಾಹನಗಳ ಕಾರ್ಯಾಚರಣೆ ಕಡಿಮೆಯಾಗುವ ಸಾಧ್ಯತೆಗಳು ಹೆಚ್ಚಾಗಿದ್ದು, ಸದರಿ ದಿನದಂದು ಬಸ್ ನಿಲ್ದಾಣಗಳಿಂದ ಸುತ್ತ-ಮುತ್ತಲಿನ ಗ್ರಾಮ ಹಾಗೂ ನಗರಗಳಿಗೆ ಪ್ರತಿನಿತ್ಯ ಕಾರ್ಯಾಚರಣೆಯಾಗುವ ವಾಹನಗಳ ಸಂಖ್ಯೆ ಕಡಿಮೆಯಾಗುವ ಸಾಧ್ಯತೆಗಳು ಹೆಚ್ಚಾಗಿವೆ. ಸಾರ್ವಜನಿಕ ಪ್ರಯಾಣಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಸಹಕರಿಸಬೇಕೆಂದು ವಾ.ಕ.ರ.ಸಾ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡದ ಬಗ್ಗೆ ಸ್ವಾಭಿಮಾನವಿರಲಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ಹೃದಯದ ಭಾಷೆಯಾಗಿದ್ದು, ಅದು ನಮ್ಮ ಉಸಿರಾಗಬೇಕು. ಕನ್ನಡದ ನೆಲ, ಜಲ, ಭಾಷೆಯ ಬಗ್ಗೆ ಪ್ರತಿಯೊಬ್ಬರಲ್ಲಿಯೂ ಆತ್ಮಾಭಿಮಾನ ಬೆಳೆಯಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ ಹೇಳಿದರು.

ಪಟ್ಟಣದ ಪುರಸಭೆಯಲ್ಲಿ 68ನೇ ರಾಜ್ಯೋತ್ಸವದ ನಿಮಿತ್ತ ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಕನ್ನಡ ಎಂಬುದು ಬರೀ ಭಾಷೆಯಲ್ಲ. ಅದು ಈ ನೆಲದ ಸಂಸ್ಕೃತಿ, ಸಂಸ್ಕಾರ, ಪರಂಪರೆ ಸಾರುವ ಶಕ್ತಿಯಾಗಿದೆ. ಪ್ರತಿಯೊಬ್ಬ ಕನ್ನಡಿಗರಲ್ಲೂ ಕನ್ನಡದ ಬಗ್ಗೆ ಅಭಿಮಾನ, ಸ್ವಾಭಿಮಾನವಿರಬೇಕು. ಹಸಿದವರಿಗೆ ಅನ್ನ, ಬಾಯಾರಿದವರಿಗೆ ನೀರು, ಆಶ್ರಯ ಕೊಟ್ಟು ಮಕ್ಕಳಂತೆ ಸಂರಕ್ಷಿಸುವ ತಾಯಿನೆಲ ಕರ್ನಾಟಕ. ರಾಜ್ಯೋತ್ಸವ ಆಚರಣೆ ನಿತ್ಯೋತ್ಸವವಾಗಬೇಕು ಎಂದರು.

ಕನ್ನಡದ 5 ನಾಡಗೀತೆಗಳನ್ನು ಹಾಡಲಾಯಿತು. ಕಾರ್ಯಕ್ರಮದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಜಯಕ್ಕ ಕಳ್ಳಿ, ರಾಜೀವ ಕುಂಬಿ, ಪೂರ್ಣಿಮಾ ಪಾಟೀಲ, ಅಶ್ವಿನಿ ಅಂಕಲಕೋಟಿ, ಜಯಮ್ಮ ಅಂದಲಗಿ, ಬಸವರಾಜ ಓದುನವರ, ಪ್ರವೀಣ ಬಾಳಿಕಾಯಿ, ಮಹಾದೇವಪ್ಪ ಅಣ್ಣಿಗೇರಿ, ರಾಮು ಗಡದವರ, ವಿಜಯ ಕರಡಿ, ಕವಿತಾ ಶರಸೂರಿ, ನೀಲಪ್ಪ ಹತ್ತಿ, ಮಂಜುಳಾ ಗುಂಜಳ, ಪುರಸಭೆ ಸದಸ್ಯರು, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಮಂಜುನಾಥ ಮುದಗಲ್, ಶಿವಣ್ಣ ಮ್ಯಾಗೇರಿ, ಬಸವಣ್ಣೆಪ್ಪ ನಂದೆಣ್ಣವರ, ನೇತ್ರಾ ಹೊಸಮನಿ, ಹನಮಂತಪ್ಪ ನಂದೆಣ್ಣವರ, ಗಿರೀಶ ಹಿರೇಮಠ ಮತ್ತಿತರಿದ್ದರು.

## ಬೀದಿ ಬದಿ ವ್ಯಾಪಾರಿಗಳಿಂದ ಪುರಸಭೆಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಬೀದಿಬದಿ ವ್ಯಾಪಾರಿಗಳಿಗೆ ವಿಧಿಸಲಾಗುವ ಶುಲ್ಕವನ್ನು ಮಾರಾಟ ಸಮಿತಿಯಲ್ಲಿ ನಿಗದಿಪಡಿಸಬೇಕು, ಶುಲ್ಕವನ್ನು ಟೆಂಡರ್ ಹರಾಜು ಪ್ರಕ್ರಿಯೆ ಮೂಲಕ ಮಾಡಬಾರದು ಎಂದು ಆಗ್ರಹಿಸಿ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ ಸಂಘಟನೆ ಒಕ್ಕೂಟದ ತಾಲೂಕು ಘಟಕದ ವತಿಯಿಂದ ಮಂಗಳವಾರ ಪುರಸಭೆಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ತಾಲೂಕಾಧ್ಯಕ್ಷ ಮಂಜುನಾಥ ಹೊಗೆಸೊಪ್ಪಿನ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರಕಾರದ ಆದೇಶದ ಪ್ರಕಾರ ಬೀದಿ ಬದಿ ವ್ಯಾಪಾರಿಗಳ ಶುಲ್ಕ ಸಂಗ್ರಹವನ್ನು ಪಟ್ಟಣ ಮಾರಾಟ ಸಮಿತಿ ಸಭೆಯಲ್ಲಿ ಮಾತ್ರ ತೀರ್ಮಾನಿಸಲು ಅವಕಾಶವಿದೆ. ಆದರೆ ಇಲ್ಲಿನ ಪುರಸಭೆಯವರು ಸಂತೆ ಕರ ವಸೂಲಿ ಹೆಸರಿನಲ್ಲಿ ಬೀದಿ ಬದಿ ವ್ಯಾಪಾರಿಗಳಿಂದ ಸುಂಕ ವಸೂಲಿ ಮಾಡುತ್ತಿರುವದು ಕಾನೂನು ಬಾಹಿರವಾಗಿದೆ ಎಂದು ಆರೋಪಿಸಿದರು.

ಪುರಸಭೆ ಕಚೇರಿ ವ್ಯವಸ್ಥಾಪಕಿ ಮಂಜುಳಾ ಹೂಗಾರ ಮನವಿ ಸ್ವಿಕರಿಸಿ, ಈ ಕುರಿತಂತೆ ಮೇಲಾಧಿಕಾರಿಗಳ ಗಮನಕ್ಕೆ ತಂದು ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಮೋದಿನಸಾಬ ಸಿದ್ದಾಪೂರ, ಹನುಮಂತಪ್ಪ ರಾಮಗೇರಿ, ದಾದಾಪೀರ ಬೆಂಡಿಗೇರಿ, ಮಂಜುನಾಥ ಬಸಾಪೂರ, ಪರಶುರಾಮ ಬಳ್ಳಾರಿ, ಮೆಹಬೂಬಸಾಬ ಸುಂಡಕೆ, ರಾಜೆಸಾಬ ಮುಲ್ಲಾನವರ, ಲಕ್ಷ್ಮಣ ಮುಳಗುಂದ, ಸೋಮಪ್ಪ ಬೆಟಗೇರಿ, ಶಬ್ಬೀರಅಹ್ಮದ ಶಿರಹಟ್ಟಿ ಸೇರಿದಂತೆ ಅನೇಕರಿದ್ದರು.

### ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ತಹಸೀಲ್ದಾರ ಮಂಜುನಾಥ ಅಮಾಸಿ ಅಭಿಮತ

# ಕನ್ನಡ ಅನ್ನದ ಭಾಷೆಯಾಗಿ ನಿತ್ಯ ಜೀವನದಲ್ಲಿ ಬಳಕೆಯಾಗಲಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಾಜ್ಯೋತ್ಸವ ಮತ್ತು ಮೈಸೂರು ರಾಜ್ಯಕ್ಕೆ 'ಕರ್ನಾಟಕ' ಮರುನಾಮಕರಣದ ಸುವರ್ಣ ಮಹೋತ್ಸವದ ಸಂದರ್ಭದಲ್ಲಿ ಕನ್ನಡ ಭಾಷೆ-ಸಂಸ್ಕೃತಿ, ನೆಲ-ಜಲದ ಸಂರಕ್ಷಣೆಯಲ್ಲಿ ನಮ್ಮೆಲ್ಲರ ಜವಾಬ್ದಾರಿಗಳ ಆತ್ಮಾವಲೋಕನವಾಗಬೇಕಿದೆ. ಕನ್ನಡ ನಮ್ಮ ಬದುಕಿನ, ಅನ್ನದ ಭಾಷೆಯಾಗಿ ನಿತ್ಯ ಜೀವನದಲ್ಲಿ ಬಳಕೆಯಾಗಬೇಕು ಎಂದು ತಹಸೀಲ್ದಾರ ಮಂಜುನಾಥ ಅಮಾಸಿ ಹೇಳಿದರು.

ಅವರು ಬುಧವಾರ ಪಟ್ಟಣದಲ್ಲಿ ತಾಲೂಕಾಡಳಿತದಿಂದ ಹಮ್ಮಿಕೊಳ್ಳಲಾಗಿದ್ದ 68ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಈ ಸುಂದರ, ಸಮೃದ್ಧ ನಾಡಿನಲ್ಲಿ ಜನಿಸಿರುವುದು ನಮ್ಮೆಲ್ಲರ ಅದೃಷ್ಟ. ಕನ್ನಡಿಗರೆಲ್ಲರೂ ಕೇವಲ ನವೆಂಬರ್ ಕನ್ನಡಿಗರಾಗದೇ, 'ಕನ್ನಡ ನಾಡಿನ ಜವಾಬ್ದಾರಿಯುತ ಪ್ರಜೆಯಾಗಿ ಕನ್ನಡದಲ್ಲೇ ಮಾತನಾಡುತ್ತೇನೆ, ಬರೆಯುತ್ತೇನೆ, ನಿತ್ಯ ವ್ಯವಹಾರ ದಲ್ಲಿ ಕನ್ನಡವನ್ನೇ ಬಳಸುತ್ತೇನೆ, ಕನ್ನಡ ನುಡಿ, ಸಂಸ್ಕೃತಿ, ಪರಂಪರೆ ಉಳಿಸಲು ಸದಾ ಕಟಿಬದ್ಧರಾಗಿರುತ್ತೇವೆ' ಎಂದು ದೃಢ ನಿರ್ಧಾರ ಮಾಡೋಣ ಎಂದರು.

ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ಹೆಸರಿಡಬೇಕು ಎಂದು ಮೊದಲು ಹೋರಾಟ ಆರಂಭವಾಗಿದ್ದೇ ನಮ್ಮ ಗದಗ ಜಿಲ್ಲೆಯಿಂದ ಎಂಬುದಕ್ಕೆ ನಾವು ಅಭಿಮಾನಪಡಬೇಕು. ಜಿಲ್ಲೆಯವರೇ ಆದ ಆಲೂರು ವೆಂಕಟರಾವ್, ಅಂದಾನಪ್ಪ ದೊಡ್ಡಮೇಟಿಯುವರಂತಹ ಮಹನೀಯರು ಕರ್ನಾಟಕ ಏಕೀಕರಣ ಚಟುವಳಿಯೊಂದಿಗೆ ರಾಜ್ಯವನ್ನು ಏಕೀಕರಿಸುವ ಕನಸು ಕಂಡರು. ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮದ ಜಾನಪದ ತಜ್ಞ ಡಾ. ಶಂಭು ಬಳಿಗಾರ ಅವರಿಗೆ ಈ ಬಾರಿಯ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಸಿಕ್ಕಿರುವುದು ಸಂತಸದ ವಿಚಾರ. ಅವರಿಗೆ ತಾಲೂಕಾಡಳಿತದ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಸರ್ಕಾರದ ನಿರ್ದೇಶನದಂತೆ 5 ಕನ್ನಡದ ನಾಡಗೀತೆಗಳನ್ನು ಮಲ್ಲು ಕಳಸಾಪುರ, ಮೆಹಬೂಬ ಹುಸೇನ್, ಪಂಚಮಿ ಅಂಬಿಗೇರ ಮತ್ತು ವಿದ್ಯಾರ್ಥಿಗಳು ಪ್ರಸ್ತುತಪಡಿಸಿದರು.

ಈ ವೇಳೆ ಶಾಲಾ ವಿದ್ಯಾರ್ಥಿಗಳಿಂದ ಕನ್ನಡ ಗೀತೆ, ಸಾಂಸ್ಕೃತಿಕ, ಭಾಷಣ ಮತ್ತು ವೇಷ-ಭೂಷಣ ಸ್ಪರ್ಧೆ ಗಮನ ಸೆಳೆಯಿತು. ಭಾಷಣ ಸ್ಪರ್ಧೆಯಲ್ಲಿ ಲಿಟಲ್ ಹಾರ್ಟ್ಸ್ ಶಾಲೆಯ ಪ್ರಜ್ಞಾ ವೀರಾಪುರ(ಪ್ರಥಮ), ಆಕ್ಸ್‌ಫರ್ಡ್ ಶಾಲೆಯ ಕಮಲಾಕ್ಷಿ ಮೇಟಿ (ದ್ವಿತೀಯ), ಸರ್ಕಾರಿ ಪ್ರೌಢಶಾಲೆಯ ರೇಖಾ ಬಾಕಳೆ(ತೃತೀಯ), ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಕನ್ನಡ ಮಾದರಿ ಪ್ರಾಥಮಿಕ ಶಾಲೆ ನಂ.4 ವಿದ್ಯಾರ್ಥಿಗಳ ತಂಡ ಪ್ರಥಮ, ಬಿಸಿಎನ್ ವಿದ್ಯಾಸಂಸ್ಥೆಯ ತಂಡ ದ್ವಿತೀಯ, ಚಂದನ ಶಾಲೆ ತೃತೀಯ ಸ್ಥಾನ ಪಡೆದರು. ವೇಷಭೂಷಣದಲ್ಲಿ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ನಂ.4ರ ಸಂಗೀತಾ ಹಳ್ಳಿಕೇರಿ(ಪ್ರಥಮ), ಮೌಲಾನ ಆಜಾದ್ ಶಾಲೆಯ ವಿದ್ಯಾರ್ಥಿನಿ ಇಕರಾ ಹಗಲದಿವಟಗಿ, ದ್ವಿತೀಯ, ದಿ.ಯೂನಿಕ್ ಶಾಲೆಯ ಹರ್ಷವರ್ಧನ ಪೂಜಾರ ತೃತೀಯ ಸ್ಥಾನ ಪಡೆದರು.

ಈ ವೇಳೆ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಆರೋಗ್ಯ ಇಲಾಖೆಯ ಬಿ.ಎಸ್ ಹಿರೇಮಠ, ಪಿಎಸ್‌ಐ ಯೂಸುಫ್ ಜಮೂಲಾ, ಎಎಸ್‌ಐ ಟಿ.ಕೆ ರಾಥೋಡ, ಡಾ.ನೀಲಕಂಠ ಹವಳದ, ಕಂದಾಯ ನೀರಿಕ್ಷಕ ಬಿ.ಎಂ ಕಾತ್ರಾಳ, ಉಪತಹಸೀಲ್ದಾರ ಪ್ರಶಾಂತ ಕಿಮಾಯಿ, ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ ಮುಂದಿನಮನಿ, ಬಿ.ಎಸ್ ಹರ್ಲಾಪೂರ, ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಎಸ್.ಸಿ ಗುಳಪ್ಪನವರ ಮುಂತಾದವರಿದ್ದರು. ಬಿಆರ್‌ಪಿ ಈಶ್ವರ ಮೇಡ್ಲೇರಿ, ಸಿಆರ್‌ಪಿ ಸತೀಶ ಬೋಮಲೆ, ಎನ್.ಎ ಮುಲ್ಲಾ, ಉಮೇಶ ನೇಕಾರ ನಿರೂಪಿಸಿದರು.

ಬಿಇಓ ಜಿ.ಎಂ ಮುಂದಿನಮನಿ ಮಾತನಾಡಿ, ಯುವಪೀಳಿಗೆ ಕನ್ನಡವನ್ನು ಪ್ರೀತಿಸಿ, ಗೌರವಿಸಬೇಕು. ಅದಕ್ಕಾಗಿ ಮನೆ-ಮನಗಳಲ್ಲಿ ಕನ್ನಡದ ಹಬ್ಬ ನಿತ್ಯೋತ್ಸವವಾಗಬೇಕು. ಕನ್ನಡ ಕೇವಲ ಭಾಷೆಯಲ್ಲ, ಅದೊಂದು ವಿಶಿಷ್ಟ ಸಂಸ್ಕೃತಿ, ಹಲವು ಒಳಿತು, ಶ್ರೇಷ್ಠತೆಗಳ ಸಂಗಮ. ಕನ್ನಡ ನಾಡಿಗೆ 1973ರಲ್ಲಿ ಕರ್ನಾಟಕ ಎಂದು ನಾಮಕರಣ ಮಾಡಿದ್ದು, ಅದಕ್ಕಿಗ 50ನೇ ವರ್ಷದ ಸಂಭ್ರಮದಲ್ಲಿ ನಾವಿದ್ದೇವೆ. ಕನ್ನಡ ರಾಜ್ಯೋತ್ಸವ ಒಂದೇ ದಿನ ಆಚರಣೆ ಮಾಡಿ ಮತ್ತೆ ಮರೆಯುವಂತಾಗದೆ, ಕನ್ನಡ ನಮ್ಮ ನಿತ್ಯ ನೂತನ ಭಾಷೆಯಾಗಲಿ ಎಂದರು.

## 'ಅಂಬಾರಿ' ಬಸ್ ಸೇವೆಗೆ ಸಚಿವ ಎಚ್.ಕೆ ಪಾಟೀಲರಿಂದ ಚಾಲನೆ



■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು ರಾಜ್ಯಕ್ಕೆ ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಅವಳಿ ನಗರದಲ್ಲಿ ಬೃಹತ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸಿಂಗಾರಗೊಂಡ ಅವಳಿ ನಗರದ ಸೌಂದರ್ಯವನ್ನು ಸವಿಯಲು 'ಅಂಬಾರಿ' ಬಸ್ ಸೇವೆಗೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ ಪಾಟೀಲರು ನಗರದ ಕೆ.ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ವಿ.ಪ ಸದಸ್ಯ ಎಸ್.ವಿ ಸಂಕನೂರ, ಗದಗ-ಬೆಟಗೇರಿ ನಗರಸಭಾಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಬೆಳಗಾವಿಯ ನಿವೃತ್ತ ಪ್ರಾದೇಶಿಕ ಆಯುಕ್ತ ಎಂ.ಜಿ ಹಿರೇಮಠ ಸೇರಿದಂತೆ ಜನಪ್ರತಿನಿಧಿಗಳು, ಗಣ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.



ನಗರದ ಕೆ.ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬುಧವಾರ ಜರುಗಿದ 'ಕನ್ನಡ ರಾಜ್ಯೋತ್ಸವದ ಧ್ವಜಾರೋಹಣ' ಕಾರ್ಯಕ್ರಮದಲ್ಲಿ ನಗರದ ಸಿ.ಡಿ.ಓ ಜೈನ್ ಪ್ರೌಢಶಾಲೆ, ತೋಂಟದಾರ್ಯ ಪ್ರೌಢಶಾಲೆ, ಮಹಾವೀರ ಜೈನ್ ಪ್ರೌಢಶಾಲೆಯ ವಿದ್ಯಾರ್ಥಿಗಳು ಪ್ರದರ್ಶಿಸಿದ ಕನ್ನಡ ನಾಡು-ನುಡಿಯ ವೈಭವ ಬಿಂಬಿಸುವ ನೃತ್ಯ ರೂಪಕಗಳು ನೆರೆದಿದ್ದ ಅಸಂಖ್ಯಾತ ಕನ್ನಡಿಗರಲ್ಲಿ ರೋಮಾಂಚನ ಮೂಡಿಸಿದವು.

### 'ಕರ್ನಾಟಕ ಸಂಭ್ರಮ-50'ರ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ

## ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೋಡುವುದೇ ಸೊಗಸು



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಾಟನ್ ಸೊಸೈಟಿ ಆವರಣದಲ್ಲಿ ನಿರ್ಮಿಸಿರುವ ಡಿ. ದೇವರಾಜ ಮಂಟಪ, ಕೆ.ಎಚ್ ಪಾಟೀಲ ವೇದಿಕೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ 'ಕರ್ನಾಟಕ ಸಂಭ್ರಮ-50'ರ ಸಾಂಸ್ಕೃತಿಕ ಕಾರ್ಯಕ್ರಮವನ್ನು ಮ್ಯಾಗ್ಸೆಸ್ಸೆ ಪ್ರಶಸ್ತಿ ಪುರಸ್ಕೃತ ರಾಜೇಂದ್ರ ಸಿಂಗ್ ಹಾಗೂ ಬೆಳಗಾವಿ ನಿವೃತ್ತ ಪ್ರಾದೇಶಿಕ ಆಯುಕ್ತ ಎಂ.ಜಿ ಹಿರೇಮಠ ಅವರು ನಗಾರಿ ಬಾರಿಸುವ ಮೂಲಕ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ ಮಾತನಾಡಿ, ಮೈಸೂರು ರಾಜ್ಯಕ್ಕೆ ಕರ್ನಾಟಕ ಹೆಸರು ನಾಮಕರಣ ಮಾಡಿ 50 ವರ್ಷಗಳು ಪೂರೈಸಿದ ಸಂಭ್ರಮದಲ್ಲಿ ನಾವಿದ್ದೇವೆ. ಕರ್ನಾಟಕ ಎಂದು ನಾಮಕರಣ ಮಾಡುವ ಮಹತ್ವದ ಸಂದರ್ಭದಲ್ಲಿ ಗದುಗಿನ ಮಹನೀಯರ ಪಾತ್ರ ಮಹತ್ವದ್ದಾಗಿದೆ. ಇಂತಹ ಸುಸಂದರ್ಭದಲ್ಲಿ ಮೂರು ದಿನಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೋಡುವುದೇ ಒಂದು ದೊಡ್ಡ ಸಂಭ್ರಮ. ಇಂತಹ ಮಹತ್ವದ ಕಾರ್ಯಕ್ರಮ ಹಮ್ಮಿಕೊಂಡಿದ್ದಕ್ಕೂ ಸಾರ್ಥಕವಾಯಿತು ಎಂದರು.

ಕಾರ್ಯಕ್ರಮದಲ್ಲಿ ಬರದ ನಾಡಿನಲ್ಲಿ ನೀರನ್ನು ಹರಿಸಿ ಕಾಡನ್ನಾಗಿಸಿದ ಮ್ಯಾಗ್ಸೆಸ್ಸೆ ಪ್ರಶಸ್ತಿ ಪುರಸ್ಕೃತ ರಾಜೇಂದ್ರಸಿಂಗ್ ಹಾಗೂ ಗದಗ-ಬೆಟಗೇರಿ ಅವಳಿ ನಗರದ 100 ಕೋಟಿಗೂ ಅಧಿಕ ಮೌಲ್ಯದ ವಕಾರಸಾಲನ್ನು ಸರಕಾರದ ಸ್ವಾಮ್ಯಕ್ಕೆ ಪಡೆಯುವಲ್ಲಿ ಮಹತ್ವದ ಪಾತ್ರ ವಹಿಸಿದ್ದ ಅಂದಿನ ಜಿಲ್ಲಾಧಿಕಾರಿ ಎಂ.ಜಿ ಹಿರೇಮಠ ಅವರು ಆಗಮಿಸಿರುವುದು ಕಾರ್ಯಕ್ರಮದ ಘನತೆ ಹೆಚ್ಚಿಸಿದೆ ಎಂದರು.

ಶಾಸಕ ಜಿ.ಎಸ್ ಪಾಟೀಲ, ಮಾಜಿ ಶಾಸಕರಾದ ಡಿ.ಆರ್ ಪಾಟೀಲ, ಜಿ.ಎಸ್ ಗಡ್ಡದೇವರಮಠ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಉಪ ಅರಣ್ಯ ಸಂರಕ್ಷಣಾಧಿಕಾರಿ ದೀಪಿಕಾ ಬಾಜಪೇಯಿ ಮುಂತಾದವರಿದ್ದರು.

### 68ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಡಾ: ಲಮಾಣಿ ಅಭಿಮತ

# 50ರ ಸಂಭ್ರಮವನ್ನು ವರ್ಷಪೂರ್ತಿ ಆಚರಿಸೋಣ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರಾಜ್ಯಕ್ಕೆ ಕರ್ನಾಟಕ ನಾಮಕರಣಕ್ಕೆ ಗದಗ ಜಿಲ್ಲೆಯ ಕೊಡುಗೆ ಅವಿಸ್ಮರಣೀಯವಾಗಿದ್ದು. ಜಿಲ್ಲೆಗೆ ಈ ಬಾರಿ ನಾಲ್ಕು ರಾಜ್ಯೋತ್ಸವ ಪ್ರಶಸ್ತಿಗಳು ಲಭಿಸಿರುವುದು ಹೆಮ್ಮೆಯ ವಿಷಯ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಬುಧವಾರ ಶಿರಹಟ್ಟಿಯಲ್ಲಿ ತಾಲೂಕಾಡಳಿತದ ವತಿಯಿಂದ ಶ್ರೀ ಎಸ್.ಎಂ ಡಬಾಲಿ ತಾಲೂಕಾ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ 68ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇದಕ್ಕೂ ಮುನ್ನ, ಬೆಳಿಗ್ಗೆ 8.30ಕ್ಕೆ ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ಬೃಹತ್ ಮೆರವಣಿಗೆಗೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ ನೀಡಿದರು. ನಂತರ ಮೆರವಣಿಗೆಯು ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಶಾಲಾ ವಿದ್ಯಾರ್ಥಿಗಳು/ಅಧಿಕಾರಿಗಳು ಮೆರವಣಿಗೆಯಲ್ಲಿ ಭಾಗಿಯಾಗಿದ್ದರು.

ತಹಸೀಲ್ದಾರ ಅನಿಲ ಬಡಿಗೇರ ಧ್ವಜಾರೋಹಣ ನೆರವೇರಿಸಿದರು. ನಂತರ ಐದು ಕನ್ನಡ ಗೀತೆಗಳನ್ನು ಪ್ರಸ್ತುತ ಪಡಿಸಲಾಯಿತು. ತದನಂತರ ಎಫ್.ಎಂ ಡಬಾಲಿ ಪ.ಪೂ ಕಾಲೇಜಿನ ಉಪನ್ಯಾಸಕಿ ಸುಧಾ ಹುಚ್ಚಣ್ಣನವರ ಉಪನ್ಯಾಸ ನೀಡಿದರು. ಎಂ.ಕೆ ಲಮಾಣಿ ಕಾರ್ಯಕ್ರಮ ನಿರೂಪಿಸಿದರು.

ತಾಪಂ ಇಓ ನಿಂಗಪ್ಪ ಓಲೇಕಾರ, ಪಿಎಸ್‌ಐ ಈರಣ್ಣ ರಿತ್ತಿ, ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಬಿಇಓ ಜಿ.ಎಂ ಮುಂದಿನಮನಿ, ಕಸಾಪ ಅಧ್ಯಕ್ಷ ಎಸ್.ಬಿ ಹೊಸೂರ, ನಾಗರಾಜ ಲಕ್ಕುಂಡಿ, ಹೊನ್ನಪ್ಪ ಶಿರಹಟ್ಟಿ, ಮುತ್ತುರಾಜ ಭಾವಿಮನಿ, ಅಶರತಅಲಿ ಢಾಲಾಯತ, ಸಂದೀಪ ಕಪ್ಪತ್ತನವರ, ಯಲ್ಲಪ್ಪ ಇಂಗಳಗಿ, ಎಚ್.ಎಂ ದೇವಗಿರಿ, ಎಚ್.ಆರ್ ಬೆನಹಾಳ, ತಾಲೂಕಾ ಸಮಾಜಕಲ್ಯಾಣಾಧಿಕಾರಿ ಶರಣಯ್ಯ ಹಿರೇಮಠ, ತೋಟಗಾರಿಕೆ ನಿರ್ದೇಶಕ ಸುರೇಶ ಕುಂಬಾರ, ಎಡಿಎ ರೇವಣೆಪ್ಪ ಮನಗೂಳಿ, ಆರ್‌ಎಫ್‌ಓ ಕೌಶಿಕ್ ದಳವಾಯಿ, ಪಿಆರ್‌ಐಡಿ ಎಇಇ ಎಂ.ಪಿ ರಾಠೋಡ, ಟಿಎಚ್‌ಓ ಡಾ. ಸುಭಾಸ್ ದೈಗೊಂಡ, ಎಸ್.ಎಸ್ ಅಸ್ಕಿ ಮುಂತಾದವರು ಉಪಸ್ಥಿತರಿದ್ದರು.

ಜಿಲ್ಲೆಯ ಅನೇಕ ಮಹನೀಯರು ಕರ್ನಾಟಕ ಏಕೀಕರಣದಲ್ಲಿ ಭಾಗಿಯಾಗಿದ್ದಾರೆ. ಅಂತಹ ಮಹನೀಯರನ್ನು ನೆನೆಯುವುದರ ಮೂಲಕ 50ರ ಈ ಸಂಭ್ರಮವನ್ನು ವರ್ಷಪೂರ್ತಿ ಆಚರಣೆ ಮಾಡಲು ನಾವೆಲ್ಲರೂ ಸನ್ನದ್ಧರಾಗಬೇಕು. ನಾಡು-ನುಡಿ-ಜಲ ರಕ್ಷಣೆ ನಮ್ಮೆಲ್ಲರ ಹೊಣೆ. ಕನ್ನಡ ಭಾಷೆ ಮಾತೃಭಾಷೆಯಾಗಿ ಹೊರಹೊಮ್ಮಬೇಕು. ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಅನ್ಯಭಾಷಿಕರು ಕನ್ನಡ ಕಲಿಯಲು ಅಸಡ್ಡೆ ತೋರುತ್ತಿದ್ದಾರೆ. ಇಂತವರಿಗೆ ಕನ್ನಡ ಕಲಿಯುವುದಕ್ಕೆ ತಿಳಿ ಹೇಳಬೇಕಾಗಿದೆ. ರೈತ ವರ್ಗವು ಮುಂಗಾರು-ಹಿಂಗಾರು ಹಂಗಾಮಿನಲ್ಲಿ ಸಕಾಲಕ್ಕೆ ಮಳೆ ಬಾರದೇ ತೀವ್ರ ಸಂಕಷ್ಟದಲ್ಲಿದ್ದಾರೆ. ಆದಷ್ಟು ಬೇಗ ಸರಕಾರ ರೈತರಿಗೆ ಪರಿಹಾರ ನೀಡಬೇಕೆಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.








# ಕರ್ನಾಟಕ ಸುವರ್ಣ ಸ್ತಂಭ



**ಸನ್ಮಾನ್ಯ ಶ್ರೀ ಸಿದ್ದರಾಮಯ್ಯ**
ಮುಖ್ಯಮಂತ್ರಿಗಳು, ಕರ್ನಾಟಕ ಸರಕಾರ.

ವಿಶ್ವಗುರು ಬಸವಣ್ಣನವರ ಶರಣ ಸಂಸ್ಕೃತಿಯನ್ನು ನಿತ್ಯ ಬದುಕಿನಲ್ಲಿ ಅಳವಡಿಸಿಕೊಂಡ ಕಾಯಕಜೀವಿ ಹಸಿದವರ ಹೊಟ್ಟೆ ತುಂಬಿಸಿದ ಅನ್ನಭಾಗ್ಯದಂತಹ ಯೋಜನೆಗಳನ್ನು ನಾಡಿನ ಜನತೆಗೆ ನೀಡಿದವರು ಮುಖ್ಯಮಂತ್ರಿ ಸನ್ಮಾನ್ಯ ಸಿದ್ದರಾಮಯ್ಯನವರು.

ಮೈಸೂರು ಜಿಲ್ಲೆಯ ಸಿದ್ದರಾಮನಹುಂಡಿಯಲ್ಲಿ 1948ರಲ್ಲಿ ಸಿದ್ದರಾಮಯ್ಯನವರು ಜನಿಸಿದರು. ಓದಿನಿಂದ ಬದುಕು ಕಟ್ಟಿಕೊಳ್ಳಬಹುದು ಎಂದು ನಿರ್ಧರಿಸಿ ಬಿ.ಎಸ್ಸಿ, ಎಲ್‌ಎಲ್‌ಬಿ. ಪದವೀಧರರಾಗಿ ವಕೀಲರಾದರು. 1983 ರಲ್ಲಿ ರಾಜಕೀಯ ಪ್ರವೇಶ ಮಾಡಿದ ಅವರು ಬಡವರ ದೀನದಲಿತರ ಶ್ರೇಯೋಭಿವೃದ್ಧಿಗಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟರು.

ಸರ್ಕಾರದಲ್ಲಿ ಹಲವಾರು ಹುದ್ದೆಗಳನ್ನು ಸಮರ್ಥವಾಗಿ ನಿಭಾಯಿಸಿ ಮುಖ್ಯಮಂತ್ರಿ ಆಗಿ ಜನಪರ ಆಡಳಿತ ನೀಡಿದವರಲ್ಲಿ ಮೊದಲಿಗರು ಸಿದ್ದರಾಮಯ್ಯನವರು.

ಬಡವರು ನೆಮ್ಮದಿಯ ಜೀವನ ನಡೆಸಬೇಕೆಂಬ ಆಶಯದೊಂದಿಗೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ, ಜನಮನ್ನಣೆಗೆ ಪಾತ್ರರಾಗಿದ್ದಾರೆ. ಪಂಚ ಗ್ಯಾರಂಟಿಗಳ ಅನುಷ್ಠಾನದಿಂದ ಕರ್ನಾಟಕ ರಾಜ್ಯದ ಲಕ್ಷಾಂತರ ಕುಟುಂಬಗಳು ಬಡತನ ರೇಖೆಗಿಂತ ಮೇಲೆ ಬರಲು ಕಾರಣೀಭೂತರಾಗಿದ್ದಾರೆ. ಬಡವರು ನೆಮ್ಮದಿಯ ಜೀವನ ಸಾಗಿಸಬೇಕು. ಸಾಮಾಜಿಕವಾಗಿ, ಆರ್ಥಿಕವಾಗಿ, ರಾಜಕೀಯವಾಗಿ ಬೆಳೆಯಬೇಕೆಂದು ಹಗಲಿರಲು ಶ್ರಮಿಸುತ್ತಿರುವವರು ಸಿದ್ದರಾಮಯ್ಯನವರು.

ಗದುಗಿನ ಹಿರಿಯ ರಾಜಕಾರಣಿ ಶ್ರೀಯುತ ಕೆ.ಎಚ್. ಪಾಟೀಲ ಅವರೊಂದಿಗೆ ಕಾರ್ಯನಿರ್ವಹಿಸಿದ ಅನುಭವ ಹೊಂದಿದ ಇವರು, ಅವರ ಪುತ್ರ ಸಚಿವರಾದ ಎಚ್.ಕೆ. ಪಾಟೀಲ ಅವರನ್ನು ಒಳಗೊಂಡ ಸಂಪುಟದ ನೇತೃತ್ವ ವಹಿಸಿ ಸಮರ್ಥ ಆಡಳಿತ ನೀಡುತ್ತಿರುವವರು ಮುಖ್ಯಮಂತ್ರಿ ಸಿದ್ದರಾಮಯ್ಯನವರು.

ಮೈಸೂರು ರಾಜ್ಯಕ್ಕೆ ಕರ್ನಾಟಕವೆಂದು ಮರುನಾಮಕರಣವಾಗಿ 50 ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ಸುವರ್ಣ ಸಂಭ್ರಮಾಚರಣೆ ಆಚರಿಸಲಾಗುತ್ತಿದೆ. ಕನ್ನಡಿಗರಾದ ನಾವೆಲ್ಲರೂ ಸುವರ್ಣ ಸಂಭ್ರಮದ ಸವಿಯೊಂದಿಗೆ ಕನ್ನಡ ಅಭಿಮಾನವನ್ನು ನಾಡಿನಲ್ಲೆಲ್ಲ ಪಸರಿಸೋಣ.

1973 ರಲ್ಲಿ ಮುಖ್ಯಮಂತ್ರಿ ದೇವರಾಜ್ ಅರಸು ಅವರು ಹಾಗೂ ಸಚಿವರಾದ ಕೆ.ಎಚ್. ಪಾಟೀಲರ ಸಮ್ಮುಖದಲ್ಲಿ ಗದುಗಿನಲ್ಲಿ ಸಂಭ್ರಮಾಚರಣೆ ವಿಜ್ರಂಭಣೆಯಿಂದ ಜರುಗಿತ್ತು. ಇಂದು ಕರ್ನಾಟಕ ಸಂಭ್ರಮ-50ರ ಸಮಾರಂಭವು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಎಚ್.ಕೆ. ಪಾಟೀಲ ಅವರ ಸಮ್ಮುಖದಲ್ಲಿ ಅತ್ಯಂತ ಅರ್ಥಪೂರ್ಣ ಹಾಗೂ ಐತಿಹಾಸಿಕವಾಗಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿ.



**ಸನ್ಮಾನ್ಯ ಶ್ರೀ ಡಿ.ಕೆ. ಶಿವಕುಮಾರ**
ಉಪಮುಖ್ಯಮಂತ್ರಿಗಳು, ಕರ್ನಾಟಕ ಸರಕಾರ.

ನಾಡಿನ ಜನತೆಗೆ ಕರ್ನಾಟಕ ಏಕೀಕರಣದ 50ನೇ ವರ್ಷದ ಶುಭಾಶಯಗಳನ್ನು ರಾಜ್ಯದ ಉಪಮುಖ್ಯಮಂತ್ರಿಯಾಗಿ ನಾನು ಕೋರಲು ಅತೀವ ಸಂತಸವೆನಿಸುತ್ತದೆ. ಬುದ್ಧ-ಬಸವ-ಅಂಬೇಡ್ಕರ್ ಅವರ ಆಶಯದಂತೆ ಜನತೆಯ ಜೀವನಕ್ಕೆ ಬೇಕಾಗುವ, ನಮ್ಮ ನಾಡಿನ ಅನೇಕ ಹಿರಿಯರ ಹೋರಾಟದಿಂದಾಗಿ ಏಕೀಕರಣಗೊಂಡಿರುವ ನಾವೆಲ್ಲಾ ತಾಯಿ ಭುವನೇಶ್ವರಿಯ ಆಶೀರ್ವಾದದಿಂದ ನೆಮ್ಮದಿಯ ಬದುಕು ಕಟ್ಟಿಕೊಂಡಿದ್ದೇವೆ.

ಕರ್ನಾಟಕ ಏಕೀಕರಣದ ಹಿನ್ನೆಲೆಯನ್ನು ಮೆಲುಕು ಹಾಕಿದಾಗ ರೋಮಾಂಚನವಾಗುತ್ತದೆ. ಅಂದಿನ ಹಿರಿಯರು ಮಾಡಿದ ತ್ಯಾಗ ಮತ್ತು ಬಲಿದಾನಗಳು ನಮಗೆ ನಿತ್ಯ ನೂತನವಾಗಿವೆ. ಅದನ್ನು ನಾವೆಲ್ಲಾ ಮೈಗೂಡಿಸಿಕೊಂಡು ನಾಡು ನುಡಿ ರಕ್ಷಣೆಗೆ ಸನ್ನದ್ದರಾಗೋಣ. ಗದಗ ನಗರದಲ್ಲಿ ನಡೆಯುತ್ತಿರುವ ಕರ್ನಾಟಕ ಸಂಭ್ರಮ-50 ಕಾರ್ಯಕ್ರಮ ಜನಮನ್ನಣೆಯೊಂದಿಗೆ ಜರುಗುತ್ತಿರುವುದು ಸಂತಸದ ಗತಿಯಾಗಿದೆ.




**ಸನ್ಮಾನ್ಯ ಶ್ರೀ ಶಿವರಾಜ ತಂಗಡಗಿ**
ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು, ಕರ್ನಾಟಕ ಸರಕಾರ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಹೊಸ ಕಾಯಕಲ್ಪ ನೀಡುವ ಕಾರ್ಯ ಮಾಡುತ್ತಿದ್ದಾರೆ. ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣಗೊಂಡು 50 ವರ್ಷ ಪೂರೈಸಿದೆ. 50 ವರ್ಷಗಳ ಹಿಂದೆ ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣಗೊಂಡಂತಹ ಸಂದರ್ಭದಲ್ಲಿ ಅಂದಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಮಾಡಿದಂತಹ ಕಾರ್ಯಗಳನ್ನು ಇಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಮಾಡುತ್ತಿರುವದು ಶ್ಲಾಘನೀಯ.

ಇಂದಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಮಾಡುತ್ತಿರುವ ಕನ್ನಡ ಕಾಯಕ ಜನ ಮೆಚ್ಚುಗೆಗೆ ಪಾತ್ರವಾಗಿದೆ.

ಕರ್ನಾಟಕ ಸಂಭ್ರಮ-50 ಕಾರ್ಯಕ್ರಮದ ಮೂಲಕ ವರ್ಷಪೂರ್ತಿ ಆಚರಣೆ ಮಾಡುವದರ ಮೂಲಕ ಇಂದಿನ ಯುವ ಪೀಳಿಗೆಯಲ್ಲಿ ಕನ್ನಡದ ನೆಲ, ಜಲ ಕುರಿತು ಜಾಗೃತಿ ಮೂಡಿಸಲು ಮುಂದಾಗಿರುವದು ಪ್ರಶಂಸನೀಯ ಕಾರ್ಯವಾಗಿದೆ.

ಗದಗನಲ್ಲಿ ಜರುಗುತ್ತಿರುವ ಐತಿಹಾಸಿಕ ಕರ್ನಾಟಕ ಸಂಭ್ರಮ-50 ಕಾರ್ಯಕ್ರಮ ನಾಡಿನ ಯುವ ಸಮುದಾಯದಲ್ಲಿ ಹೊಸ ಮನ್ವಂತರಕ್ಕೆ ನಾಂದಿಯಾಗಲಿ.



**ಸನ್ಮಾನ್ಯ ಶ್ರೀ ಎಚ್.ಕೆ. ಪಾಟೀಲ**
ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರು, ಕರ್ನಾಟಕ ಸರಕಾರ.

'ಕಾವೇರಿಯಿಂದ ಮಾ ಗೋದಾವರಿವರಮಿರ್ದ ನಾಡದಾ ಕನ್ನಡದೋಳ್ .......

ರೋಮಾಂಚನ ತರಿಸುವ ನೃಪತುಂಗ ಕವಿಯ ಈ ಸಾಲುಗಳು ಕನ್ನಡ ನಾಡಿನ ಉದ್ದಗಲ ವ್ಯಾಪ್ತಿಯನ್ನು ಸಾರುತ್ತದೆ. ಚಲುವ ಕನ್ನಡ ನಾಡಿನ ಕನಸನ್ನು ಕಂಡ ನಮ್ಮ ಗದುಗಿನ ಹುಯಿಲಗೋಳ ನಾರಾಯಣರಾಯರು 'ಪಾವನೆಯರ.... ಕೃಷ್ಣ ಭೀಮೆಯರ ತಾಯ್ನಾಡು, ಕಾವೇರಿ ಗೋದೆಯರ ಮೈದೊಳೆವ ನಲುನಾಡು: ಅವಗಂ ಬಗೆಯ ನಗಿಸುವ ಕಬ್ಬಿಗರ ಹಾಡು, ಕಾವ ಗದುಗಿನ ವೀರನಾರಾಯಣನ ಬೀಡು' ಎಂದು ಹಾಡಿ ರವಿ ಕಾಣದ್ದನ್ನು ಕವಿ ಕಂಡ ಎಂಬುದನ್ನು ಅಕ್ಷರಶಃ ಅನ್ವರ್ಥಕಗೊಳಿಸಿದ್ದಾರೆ.

ಮೈಸೂರು ರಾಜ್ಯವು 1956 ರಲ್ಲಿ ಭಾಷಾವಾರು ಪ್ರಾಂತ್ಯಗಳ ಜೊತೆಗೆ ಕನ್ನಡ ಭಾಷಿಕರಿಗಾಗಿ ಒಂದು ಪ್ರತ್ಯೇಕ ರಾಜ್ಯವಾಗಿ ಉದಯಿಸಿತು. ಕರ್ನಾಟಕ ಏಕೀಕರಣ ನಂತರ ಮೈಸೂರು ರಾಜ್ಯವನ್ನು ಕರ್ನಾಟಕ ಎಂಬುದಾಗಿ ನಾಮಕರಣ ಮಾಡಬೇಕೆಂಬ ಕರ್ನಾಟಕ ರಾಜ್ಯದ ಎಲ್ಲಾ ನಾಗರಿಕರ ಒಕ್ಕೊರಲಿನ ಆಶೋತ್ತರಗಳನ್ನು ಪ್ರತಿಬಿಂಬಿಸುವ ವಿಶಿಷ್ಟವಾದ ಆಸೆ 1973 ರಲ್ಲಿ ಕೈಗೂಡಿತ್ತು.

1970-71 ರಲ್ಲಿ ನಡೆದಂತಹ ಮಧ್ಯಂತರ ಚುನಾವಣೆಯ ಕಾಲಘಟ್ಟದಲ್ಲಿ ಇದೊಂದು ಚುನಾವಣಾ ಜನಮತ ಸಂಗ್ರಹದ ವಿಷಯವಾಗಿ ಮಾರ್ಪಟ್ಟಿತ್ತು. ಮೈಸೂರು ರಾಜ್ಯದ ಹೆಸರು ಬದಲಾವಣೆಗಾಗಿ ವಾದ ವಾಗ್ವಾದಗಳು ಬಹಿರಂಗವಾಗಿ ಹಾಗೂ ಆಂತರಿಕವಾಗಿ ಪಕ್ಷಗಳ ಒಳಗೆ ಹೊರಗೆ ವಿಸ್ತೃತವಾದ ಚರ್ಚೆಯಾಗಿತ್ತು. ದೇವರಾಜ ಅರಸು ಅವರು ಚುನಾವಣಾ ಪ್ರಚಾರ ಭಾಷಣದಲ್ಲಿ ಆಡಿದ ಮಾತುಗಳು ದೊಡ್ಡ ವಿವಾದಕ್ಕೆ ಕಾರಣವಾಯಿತು. ಶಾಸನ ಸಭೆಯ ಪ್ರತಿನಿಧಿಗಳ ಅಭಿಪ್ರಾಯದ ಅಧಾರದ ಮೇಲೆ ಹೆಸರು ಬದಲಾವಣೆಯನ್ನು ಮಾಡೋಣ, ಬಹುಮತದ ಅಭಿಪ್ರಾಯದಂತೆ ಹೆಸರು ಬದಲಾವಣೆಯನ್ನು ಪರಿಗಣಿಸೋಣ ಎಂದು ಹೇಳಿದ್ದು ದೇಶದಲ್ಲಿ ಬಹುಕಾಲ ಚರ್ಚೆಗೆ ಕಾರಣವಾಯಿತು.

ಮೈಸೂರು ರಾಜ್ಯ ಉದಯವಾದ ಸರಿಯಾಗಿ 17 ವರ್ಷಗಳ ನಂತರ ಮೈಸೂರು ರಾಜ್ಯವನ್ನು ಕರ್ನಾಟಕವೆಂದು ನಾಮಕರಣ ಮಾಡುವ ಚಾರಿತ್ರಿಕ ನಿರ್ಣಯವನ್ನು ವಿಧಾನ ಮಂಡಲದ ಉಭಯ ಸದನಗಳಲ್ಲಿ ಮಂಡಿಸಲಾಯಿತು. ಅಂದು ಕನ್ನಡ ನಾಡಿನ ಮುಖ್ಯಮಂತ್ರಿಯಾಗಿದ್ದ ಡಿ. ದೇವರಾಜ ಅರಸು ಅವರು ವಿಧಾನಸಭೆಯಲ್ಲಿ ಈ ಚಾರಿತ್ರಿಕ ನಿರ್ಣಯವನ್ನು ಮಂಡಿಸಿದರೆ, ವಿಧಾನ ಪರಿಷತ್ತಿನಲ್ಲಿ ಇದೇ ನಿರ್ಣಯವನ್ನು ಅರಣ್ಯ ಇಲಾಖೆಯ ಸಚಿವರಾಗಿದ್ದ ಕೆ.ಎಚ್. ಪಾಟೀಲ ಮಂಡಿಸಿದರು.

'ಭಾರತ ಸಂವಿಧಾನದಲ್ಲಿ ನಮೂದಿಸಿದ ಈ ರಾಜ್ಯದ ಹೆಸರನ್ನು 'ಕರ್ನಾಟಕ' ವೆಂಬುದಾಗಿ ಬದಲಾಯಿಸಬೇಕೆಂದು ಈ ಸಭೆಯವರು ತಮ್ಮ ಖಚಿತ ಅಭಿಪ್ರಾಯವನ್ನು ಘೋಷಿಸಿ ಈ ಬಗ್ಗೆ ಅಗತ್ಯವಾದ ಸಂವಿಧಾನದ ತಿದ್ದುಪಡಿಗಳನ್ನು ರಾಜ್ಯ ಸರ್ಕಾರದವರು ಪಡೆದುಕೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಈ ಸಭೆಯವರು ಶಿಫಾರಸು ಮಾಡುತ್ತಾರೆ' ಎಂದು ಅರಸು ಅವರು ನಿರ್ಣಯ ಮಂಡಿಸಿದ್ದರು. ನಂತರ ತಮ್ಮ ಭಾಷಣವನ್ನು ಪ್ರಾರಂಭಿಸಿದ ಅವರು, 'ಈ ದಿವಸ ನಮ್ಮ ದೇಶದ ಇತಿಹಾಸದಲ್ಲಿ ಒಂದು ಹೊಸ ಅಧ್ಯಾಯ ಪ್ರಾರಂಭವಾಗತಕ್ಕ ದಿವಸವಾಗಿದೆ. ಅದರ ಕಾರಣ ಏನು ಎನ್ನುವುದು ಈ ಸಭೆಗೆ ವಿವರಿಸಬೇಕಾದ ಅಗತ್ಯವಿಲ್ಲ' ಎಂದು ಅಭಿಪ್ರಾಯಪಟ್ಟಿದ್ದರು. ಅರಸು ಅವರ ಭಾಷಣದ ನಂತರ ನಿರ್ಣಯವನ್ನು ಅಂಗೀಕರಿಸಲಾಯಿತು. ಅರಸು ಅವರು 'ಕರ್ನಾಟಕಕ್ಕೆ' ಎಂದಾಗ ಎಲ್ಲಾ ಸದಸ್ಯರು 'ಜಯವಾಗಲಿ' ಎಂದು ಘೋಷಣೆ ಕೂಗಿದರು.

ವಿಧಾನ ಪರಿಷತ್ತಿನಲ್ಲಿ ಕೆ.ಎಚ್. ಪಾಟೀಲ ಅವರು ಐತಿಹಾಸಿಕ ಭಾಷಣ ಮಾಡಿದ್ದರು. 'ಇವತ್ತು ಭಾರತದ ನಕ್ಷೆಯಲ್ಲಿ ಕರ್ನಾಟಕ ಒಂದು ದೊಡ್ಡ ಪ್ರಾಂತವಾಗಿದೆ. ಈ ಪ್ರಾಂತದಲ್ಲಿ ಮುಂಬಯಿ ಪ್ರದೇಶದವರು ತಮ್ಮ ನಡೆ-ನುಡಿಯನ್ನು ಕರೆದುಕೊಂಡು ಬಂದಿದ್ದಾರೆ. ಮದ್ರಾಸ್, ಹೈದರಾಬಾದ್ ಮುಂತಾದ ಪ್ರಾಂತಗಳಿಂದ ಬಂದಿರುವವರೂ ಸಹ ತಮ್ಮ ತಮ್ಮ ನಡೆ-ನುಡಿಗಳನ್ನು ತಂದಿದ್ದಾರೆ. ಮೈಸೂರಿಗೆ ಹಿಂದಿನಿಂದಲೂ ಸಹ ಒಂದು ಹಿರಿಮೆ ಇದೆ. ಸುಗಂಧದ ಹಿರಿಮೆ, ಕನ್ನಡದ ಹಿರಿಮೆ ಇದೆ. ಮುಂಬಯಿ ಪ್ರದೇಶಗಳಿಂದ ಕಾರವಾರ ಮುಂತಾದ ಬಂದರುಗಳು ಸೇರಿವೆ...

ತುಂಗಭದ್ರ ಸೌಕರ್ಯ ಹೊಂದಿದೆ. ಮಂಗಳೂರು ಬಂದರು ಬಂದಿರುವುದರಿಂದ ಔದ್ಯೋಗಿಕ ಬೆಳವಣಿಗೆಗೆ ಕಾರಣವಾಗಿದೆ.

ಉತ್ತರ ಕರ್ನಾಟಕದಿಂದ ಬಂದಂಥ ಜನಗಳೂ ಕೂಡ ಹೇಳುತ್ತಾರೆ, 'ಇದು ನಮ್ಮ ಕೈಯಲ್ಲೂ ಆಗಲಿಲ್ಲ. ಮೈಸೂರಿನವರೇ ಮುಂದಾಗಿ ಬಂದು ತಾವು ಇದಕ್ಕಾಗಿ ತ್ಯಾಗ ಬೇಕಾದರೂ ಮಾಡುತ್ತೇವೆ. ಈ ಹೆಸರನ್ನು ಇಡೋಣ ಎಂದು ಮೈಸೂರಿನವರು ಉದಾರ ದೃಷ್ಟಿಯಿಂದ ಹೇಳಿದ್ದಾರೆ' ಎಂದು. ಕರ್ನಾಟಕ ಮೊದಲಿನ ಕಾಲದೊಳಗೆ ಏನು ಇತ್ತೋ ಚಾಲುಕ್ಯ, ಕದಂಬರ ಕಾಲದಲ್ಲಿ, ಹಾಗೆ ಬರಬೇಕೆಂದು ತಾವು ಆಶೀರ್ವಾದ ಮಾಡಬೇಕು' ಎಂದು ಅವರು ಹೇಳಿದ್ದರು.

ಕರ್ನಾಟಕ ನಾಮಕರಣ ಮಹೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂಬ ಉದ್ದೇಶದಿಂದ ಅಂದು ಕರ್ನಾಟಕ ನಾಮಕರಣ ಮಹೋತ್ಸವ ಸಮಿತಿಯನ್ನು ರಚಿಸಲಾಯಿತು. ಕರ್ನಾಟಕ ನಾಮಕರಣದ ಮಹೋತ್ಸವ ಅತ್ಯಂತ ಅದ್ದೂರಿಯಾಗಿ ನೇರವೇರಿತು. ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ತಮ್ಮ ಸಂದೇಶದಲ್ಲಿ ಕನ್ನಡ ನಾಡನ್ನು ಕರ್ನಾಟಕ ಎಂದು ನಾಮಕರಣ ಮಾಡಿದ ಸಂದರ್ಭವು ನಾಡಿನ ಮುಗಿಲಲಿ ಮಾರ್ಧನಿಗೊಳ್ಳುವಂತೆ ಮಾಡಿದರು. ಹಂಪೆ ಮತ್ತು ಗದುಗಿನಲ್ಲಿ ನಡೆದ ಉತ್ಸವಗಳ ಸಂದರ್ಭದಲ್ಲಿ ಕರ್ನಾಟಕದ ಹಿರಿಮೆ ಗರಿಮೆಗಳನ್ನು ಬಾನೆತ್ತರಕ್ಕೆ ಕೊಂಡೊಯ್ಯುವ ಸಂಭ್ರಮ ಸಡಗರಗಳು ನಡೆದವು.

### ಝುಗಮಗಿಸುವ ದೀಪಾಲಂಕಾರ

ಐವತ್ತು ವರ್ಷಗಳ ಹಿಂದೆ ಜರುಗಿದ ಕರ್ನಾಟಕ ನಾಮಕರಣ ಸಂಭ್ರಮೋತ್ಸವದ ಐತಿಹಾಸಿಕ ಕಾರ್ಯಕ್ರಮದ ಮರುಸೃಷ್ಟಿಯ ಕಾರ್ಯಕ್ರಮಕ್ಕೆ ಗದಗ-ಬೆಟಗೇರಿ ಇಡೀ ನಗರ ದೀಪಾಲಂಕಾರ ಹಾಗೂ ಚಿತ್ತಾರಗಳೊಂದಿಗೆ ಮಧುಮಗಳೇ ನಾಚುವಂತೆ ಸಿಂಗಾರಗೊಂಡಿದೆ. ಅವಳಿ ನಗರದ ವೃತ್ತಗಳು, ಬೀದಿಗಳು, ರಸ್ತೆಗಳು ಕನ್ನಡ ಭಾವುಟ ಹಾಗೂ ದೀಪಾಲಂಕರಗಳೊಂದಿಗೆ ಝುಗಮಗಿಸುತ್ತಿದ್ದು, ಮೈಸೂರು ದಸರಾವನ್ನೂ ನಾಚಿಸುವಂತಿದೆ.











## ೧೯೭೩-೨೦೨೩

### ಸ್ತಂಭದ ಕನಸು ನನಸು

**ಮೈಸೂರು ರಾಜ್ಯಕ್ಕೆ ಕರ್ನಾಟಕ ನಾಮಕರಣವಾದ ಬಳಿಕ ಅದರ ಸವಿನೆನಪಿಗೆ ಸ್ತಂಭ ಮಾಡಲು ನಿರ್ಧರಿಸಿತ್ತಾದರೂ ಅದು ಕಾರ್ಯರೂಪಕ್ಕೆ ಬಂದಿರಲಿಲ್ಲ. ಇದೀಗ ಕರ್ನಾಟಕ ನಾಮಕರಣದ ಸುವರ್ಣ ಸಂಭ್ರಮದಲ್ಲಿ ಗದಗನಲ್ಲಿ 31 ಅಡಿ ಎತ್ತರದ ಸ್ತಂಭವು ಮೆರವಣಿಗೆ ಸಾಗಿದ ಮಾರ್ಗ ಮಧ್ಯದ ಪಾಲಾ-ಬಾದಾಮಿ ರಸ್ತೆಯ ಭೂಮರಡ್ಡಿ ವೃತ್ತದ ನೈಋತ್ಯ ದಿಕ್ಕಿನಲ್ಲಿ ಸುವರ್ಣ ಸ್ತಂಭ ರಾರಾಜಿಸಲಿದೆ.**

### ವೇದಿಕೆ ಕಾರ್ಯಕ್ರಮ

ನವೆಂಬರ್ 3 ರಂದು ಮಧ್ಯಾಹ್ನ 11.30 ಗಂಟೆಗೆ ನಗರದ ದಿ ಕಾಟನ್ ಸೇಲ್ ಸೊಸೈಟಿಯಲ್ಲಿನ ಡಿ. ದೇವರಾಜ ಅರಸು ಮಂಟಪ ಶ್ರೀ ಕೆ.ಎಚ್. ಪಾಟೀಲ ವೇದಿಕೆಯಲ್ಲಿ ಮೈಸೂರು ರಾಜ್ಯಕ್ಕೆ ಕರ್ನಾಟಕ ನಾಮಕರಣ ಸುವರ್ಣ ಮಹೋತ್ಸವದ ಕರ್ನಾಟಕ ಸಂಭ್ರಮ-50ರ ಕಾರ್ಯಕ್ರಮವನ್ನು ರಾಜ್ಯದ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಫರೀದ್, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಸರ್ಕಾರದ ಸಚಿವ ಸಂಪುಟವೇ ಇದನ್ನು ಸಾಕ್ಷೀಕರಿಸಲಿದೆ.

1973 ರಲ್ಲಿ ಕರ್ನಾಟಕ ನಾಮಕರಣಗೊಂಡ ಸವಿನೆನಪಿನಲ್ಲಿ ಕರ್ನಾಟಕ ನಾಮಕರಣ ಮಹೋತ್ಸವ ಸಮಿತಿ ಪರವಾಗಿ ಡಿ.ಆರ್. ಪಾಟೀಲ ಅವರು ಮುದ್ರಣ ಮಾಡಿಸಿದ್ದ ಕರ್ನಾಟಕ ಮಹೋತ್ಸವ ಸಂಚಿಕೆಯನ್ನೇ ಗದಗ ಜಿಲ್ಲಾಡಳಿತ ಪ್ರಸ್ತುತ ಯಥಾವತ್ ಮರುಮುದ್ರಿಸಲಾಗಿದ್ದು, ಅದರ ಬಿಡುಗಡೆಯೂ ನಡೆಯಲಿದೆ.

ಐವತ್ತು ವರ್ಷಗಳ ಹಿಂದೆ ನಡೆದಿದ್ದ ಕರ್ನಾಟಕ ನಾಮಕರಣ ಅಪರೂಪದ ಭಾವಚಿತ್ರಗಳ ಪ್ರದರ್ಶನ, ಕರ್ನಾಟಕ ಜಾನಪದ ವಿಶ್ವ ವಿದ್ಯಾಲಯದ ಹತ್ತು ಜಿಲ್ಲೆಗಳ ಗ್ರಾಮ ಚರಿತ ಕೋಶ ಬಿಡುಗಡೆ, ಗದಗ ಜಿಲ್ಲೆಯ ಪ್ರವಾಸಿ ತಾಣಗಳ ಪ್ರದರ್ಶನಗಳ ಜತೆಗೆ ಸ್ಥಳೀಯ ಹಾಗೂ ರಾಷ್ಟ್ರ ಮತ್ತು ಅಂತರ್‌ರಾಷ್ಟ್ರೀಯ ಕಲಾವಿದರಿಂದ ಸಂಗೀತ ಸಂಜೆ-2023ರ ಹೊಸ ಸೇರ್ಪಡೆ.

**ಅದೇ ಮಾರ್ಗದಲ್ಲೇ ಮೆರವಣಿಗೆ :** 1973 ರಲ್ಲಿ ಅಂದಿನ ಮುಖ್ಯಮಂತ್ರಿ ಡಿ. ದೇವರಾಜ ಅರಸು ನೇತೃತ್ವದಲ್ಲಿ ಅಂದು ಮಂತ್ರಿಯಾಗಿದ್ದ ಕೆ.ಎಚ್. ಪಾಟೀಲ ಅವರ ಸಾರಥ್ಯದಲ್ಲಿ ನಡೆದ ಮೆರವಣಿಗೆಯ ಹಾದಿಯಲ್ಲಿಯೇ ಕರ್ನಾಟಕ ನಾಮಕರಣ ಸುವರ್ಣ ಸಂಭ್ರಮದ ಮೆರವಣಿಗೆಯೂ ಸಾಗಲಿದೆ.

**ಮೆರವಣಿಗೆ ಮಾರ್ಗ :** ನಗರದ ಶ್ರೀ ವೀರನಾರಾಯಣ ದೇವಸ್ಥಾನದಿಂದ ನಾಡದೇವತೆ ತಾಯಿ ಭುವನೇಶ್ವರಿಗೆ ಪುಷ್ಪಾರ್ಚನೆ ಮೂಲಕ ಕರ್ನಾಟಕ ಸಂಭ್ರಮ-50ರ ಮೆರವಣಿಗೆ ಪ್ರಾರಂಭಗೊಳ್ಳಲಿದ್ದು ಅಲ್ಲಿಂದ ಜಾಮೀಯಾ ಮಸೀದಿ, ಬಸವೇಶ್ವರ ವೃತ್ತ, ಕೆ.ಎಚ್. ಪಾಟೀಲ ವೃತ್ತ, ಪಂ. ಪುಟ್ಟರಾಜ ಕವಿ ಗವಾಯಿಗಳ ವೃತ್ತ (ಭೂಮರಡ್ಡಿ ವೃತ್ತ), ಜನರಲ್ ಕಾರಿಯಪ್ಪ ವೃತ್ತದ ಮೂಲಕ ದಿ ಕಾಟನ್ ಸೇಲ್ ಸೊಸೈಟಿಗೆ ತಲುಪಲಿದೆ. ಮೆರವಣಿಗೆಯಲ್ಲಿ ನಾಡಿನ ಹಲವು ಕಲಾತಂಡಗಳು ಪಾಲ್ಗೊಳ್ಳುವ ಮೂಲಕ ಇತಿಹಾಸವನ್ನು ನೆನಪಿಸಲಿವೆ.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka